ಕರ್ನಾಟಕಸರ್ಕಾರ

(ಕಂದಾಯಇಲಾಖೆ)

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಮೈಸೂರು ಜಿಲ್ಲೆ, ಮೈಸೂರು

ದೂರವಾಣಿ ಸಂಖ್ಯೆ:0821-2424079,2422110,2428383

COVID-19

ಫ್ಯಾಕ್ಸ್ನಂ : 2429012 & 2428383 E-Mail : dcofficemysuru@gmail.com

---

ವಿಷಯ: ಕೋವಿಡ್-19 (ಕರೊನಾ ವೈರಾಣು ಕಾಯಿಲೆ-2019)ಯ ಸ್ಫೋಟ ಮತ್ತು ಹರಡುವುದನ್ನು ತಡೆಗಟ್ಟುವ ಹಾಗೂ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳುವ ಸಂಬಂಧ ಜಿಲ್ಲೆಯಾದ್ಯಂತ ಇರುವ ಅಗತ್ಯ ವಸ್ತುಗಳು ಮತ್ತು ಇಂಧನದ ದಾಸ್ತಾನು ಕೊರತೆಯಾಗದಂತೆ ಕ್ರಮ ವಹಿಸುವ ಬಗ್ಗೆ.

ಉಲ್ಲೇಖ:

1. ಕರ್ನಾಟಕ ಸಾಂಕ್ರಾಮಿಕ ರೋಗಗಳು, COVID-19 ರೆಗ್ಯೂಲೇಷನ್ಸ್ -2020ರ ಅಧಿಸೂಚನೆ ಸಂಖ್ಯೆ: ಹೆಚ್.ಎಫ್,ಡಬ್ಲ್ಯೂ,54 ಸಿ ಜಿ ಎಂ 2020 ದಿನಾಂಕ: 11.03.2020.
2. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು ರವರ ಆದೇಶ ಸಂಖ್ಯೆ DD/SSU/COVID-19/17/19-20 ದಿನಾಂಕ:13-03-2020
3. ಸರ್ಕಾರದ ಕಂದಾಯ ಇಲಾಖೆಯ ಆದೇಶ ಸಂಖ್ಯೆ: ಆರ್.ಡಿ.157 ಟಿ ಎನ್ ಆರ್ 2020, ದಿನಾಂಕ:14.03.2020
4. ಮಾನ್ಯ ಕಂದಾಯ ಸಚಿವರು ಕರ್ನಾಟಕ ಸರ್ಕಾರ ರವರ ಪತ್ರದ ಸಂಖ್ಯೆ: ಕಂ.ಸ 678 / 2020 ದಿನಾಂಕ: 18.03.2020
5. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು ರವರ ಪರಿಷ್ಕೃತ ಆದೇಶ ಸಂಖ್ಯೆ DD/SSU/COVID-19/17/19-20 ದಿನಾಂಕ: 20-03-2020

DISTRICT MAGISTRATE MYSORE DISTRICT

*****

ಪ್ರಸ್ತಾವನೆ:

ಮೈಸೂರು ಜಿಲ್ಲಾ ವ್ಯಾಪ್ತಿಯಲ್ಲಿ COVID-19 ಸೋಂಕು ಹರಡದಂತೆ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳಲು ಹಾಗೂ ವೈಯಕ್ತಿಕ ಮತ್ತು ಸಮುದಾಯದ ತುರ್ತು ಪರಿಸ್ಥಿತಿಯನ್ನು ಎದುರಿಸಲು ಈಗಾಗಲೇ ಕ್ರಮಗಳನ್ನು ತೆಗೆದುಕೊಳ್ಳಲಾಗಿರುತ್ತದೆ.

ರಾಜ್ಯದಲ್ಲಿ ಕೊರೊನಾ ರೋಗಾಣು ಹರಡುತ್ತಿರುವ ಬಗ್ಗೆ ಹಿನ್ನೆಲೆಯಲ್ಲಿ ಸರ್ಕಾರವು ಉಲ್ಲೇಖ (2) ರ ಆದೇಶದಲ್ಲಿ Disaster Management Act 2005 ರ ವಿಧಿ 22 ರ ಉಪಪ್ರಕರಣ 2 (H) ರ ಅಡಿಯಲ್ಲಿ ಪ್ರದತ್ತವಾದ ಅಧಿಕಾರಿಯನ್ನು ಚಲಾಯಿಸಿ ಸದರಿ ಕಾಯ್ದೆಯ ಕಲಂ 24 (a) (b) (f) (h) (j) (k) ಮತ್ತು (l) ರಡಿ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರಿಗೆ (ಜಿಲ್ಲಾಧಿಕಾರಿಗಳು) COVID-19 ಸಾಂಕ್ರಾಮಿಕ ರೋಗವನ್ನು ತಡೆಗಟ್ಟುವ ನಿಟ್ಟಿನಲ್ಲಿ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳಲು ಆದೇಶಿಸಲಾಗಿರುತ್ತದೆ.

ಈ ಹಿನ್ನಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ಹಾಗೂ ಮುಂದಿನ ದಿನಗಳಲ್ಲಿ ಅಗತ್ಯತೆಗೆ ಅನುಗುಣವಾಗಿ ಉಪಯೋಗಿಸಲು ಅವಕಾಶವಾಗುವಂತೆ ಮೈಸೂರು ಜಿಲ್ಲಾ ವ್ಯಾಪ್ತಿಯಲ್ಲಿರುವ ಅಗತ್ಯ ವಸ್ತುಗಳ ದಾಸ್ತಾನು ಇರುವುದನ್ನು ಖಚಿತಪಡಿಸಿಕೊಳ್ಳುವ ಹಾಗೂ ಅಗತ್ಯತೆಗೆ ಅನುಸಾರವಾಗಿ ದಾಸ್ತಾನು ಇಡುವ ಉದ್ದೇಶದಿಂದ ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

# ಆದೇಶ

MYSDC/MAG1/MLO/71(6)/2020(E-95753) ದಿನಾಂಕ: 21-03-2020

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಅಭಿರಾಮ್ ಜಿ ಶಂಕರ್, ಭಾ.ಆ.ಸೇ. ಜಿಲ್ಲಾಧಿಕಾರಿ ಮತ್ತು ಜಿಲ್ಲಾ ದಂಡಾಧಿಕಾರಿ, ಮೈಸೂರು ಜಿಲ್ಲೆ ಆದ ನಾನು ಕರ್ನಾಟಕ ಸಾಂಕ್ರಾಮಿಕ ರೋಗಗಳು, COVID-19 ರೆಗ್ಯೂಲೇಷನ್ಸ್-2020ರ ನಿಯಮ 12 ರಲ್ಲಿ ಹಾಗೂ Disaster Management Act 2005 ಕಲಂ 24 ಮತ್ತು 34(e) ಮತ್ತು (h) ರಡಿಯಲ್ಲಿ ಪ್ರದತ್ತವಾದ ಅಧಿಕಾರ ಚಲಾಯಿಸಿ, ಜಂಟಿ ನಿರ್ದೇಶಕರು, ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ, ಮೈಸೂರು ರವರನ್ನು ಮೈಸೂರು ನಗರ ಮತ್ತು ಜಿಲ್ಲೆಯಾದ್ಯಂತ ಲಭ್ಯವಿರುವಂತಹ ದಿನಸಿ / ಆಹಾರ ಪದಾರ್ಥ / ಅಗತ್ಯ ವಸ್ತುಗಳು ಮತ್ತು ಇಂಧನ ಇತ್ಯಾಧಿಗಳ ಪ್ರಸ್ತುತ ಲಭ್ಯತೆ / ದಾಸ್ತಾನನ್ನು ಪರಿಶೀಲಿಸಿ ಅಗತ್ಯ ವಸ್ತುಗಳಿಗೆ ಸಂಬಂಧಿಸಿದಂತೆ ಯಾವುದೇ ಕೊರತೆಯಾಗದಂತೆ ಅಗತ್ಯವಾದ ಕ್ರಮಗಳನ್ನು ತೆಗೆದುಕೊಳ್ಳಲು ಆದೇಶಿಸಿದೆ.

ಜಂಟಿ ನಿರ್ದೇಶಕರು, ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ, ಮೈಸೂರು ರವರು ತಕ್ಷಣಕ್ಕೆ ಲಭ್ಯವಿರುವ ಹಾಗೂ ಪ್ರತಿದಿನ ಆಹಾರ ದಾಸ್ತಾನಿನ ಹಾಗೂ ಇಂಧನ ದಾಸ್ತಾನು ವಿವರವನ್ನು ಈ ಕೆಳಗೆ ಸಹಿ ಮಾಡಿರುವವರಿಗೆ, ಪೊಲೀಸ್ ಆಯುಕ್ತರು, ಮೈಸೂರು ನಗರ, ಮೈಸೂರು ಹಾಗೂ ಪೊಲೀಸ್ ಅಧೀಕ್ಷಕರು, ಮೈಸೂರು ಜಿಲ್ಲೆ, ಮೈಸೂರು ರವರಿಗೆ ನೀಡುವಂತೆ ನಿರ್ದೇಶಿಸಿದೆ.

ಈ ಆದೇಶವನ್ನು ನನ್ನ ಸಹಿ ಮತ್ತು ಮೊಹರಿನೊಂದಿಗೆ ಈ ದಿನ ದಿನಾಂಕ: 21.03.2020 ರಂದು ಹೊರಡಿಸಿದೆ.

DISTRICT MAGISTRATE MYSORE DISTRICT

(ಅಭಿರಾಮ್ ಜಿ.ಶಂಕರ್)
ಜಿಲ್ಲಾಧಿಕಾರಿ
ಹಾಗೂ ಜಿಲ್ಲಾ ದಂಡಾಧಿಕಾರಿ
ಮೈಸೂರು ಜಿಲ್ಲೆ, ಮೈಸೂರು

ಪ್ರತಿಯನ್ನು:-ಕೆಳಕೆಂಡವರಿಗೆ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.

1. ಮಾನ್ಯ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು
2. ಪೊಲೀಸ್ ಆಯುಕ್ತರು, ಮೈಸೂರು ನಗರ, ಮೈಸೂರು.
3. ಪೊಲೀಸ್ ಅಧೀಕ್ಷಕರು, ಮೈಸೂರು ಜಿಲ್ಲೆ, ಮೈಸೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು.
5. ಆಯುಕ್ತರು, ಮೈಸೂರು ಮಹಾನಗರ ಪಾಲಿಕೆ, ಮೈಸೂರು.
6. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.
7. ಜಂಟಿ ನಿರ್ದೇಶಕರು, ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ, ಮೈಸೂರು
8. ಉಪವಿಭಾಗಾಧಿಕಾರಿಗಳು, ಮೈಸೂರು / ಹುಣಸೂರು ಉಪವಿಭಾಗ, ಮೈಸೂರು.
9. ಜಿಲ್ಲೆಯ ಎಲ್ಲಾ ತಹಶೀಲ್ದಾರರಿಗೆ.
10. ಜಿಲ್ಲೆಯ ಎಲ್ಲಾ ಕಾರ್ಯನಿರ್ವಾಹಕಾಧಿಕಾರಿಗಳಿಗೆ